## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಜಯಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನ ಕೋಲ್ಹಾರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ. ಇಲಾಖೆರವರ ಕಡತ ಸಂ:ಗ್ರಾಕುನೀ&ನೈಇ/ಮುಇ/146/ತಾಂತ್ರಿಕ/2021-22

--***--

**ಪೀಠಿಕೆ:**

ವಿಜಯಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನ ಕೋಲ್ಹಾರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ 2021-22ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದನೆ ನೀಡಲಾಗಿದೆ.

ಈ ಯೋಜನೆಯ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆಯ ಅವಶ್ಯಕತೆ ಇರುವುದರಿಂದ **ರೂ.633.10ಲಕ್ಷ** ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು ಪ್ರಸ್ತಾವನೆಯನ್ನು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮೇಲೆ ಓದಲಾದ ಕಡತದಲ್ಲಿ ಕೋರಿರುತ್ತಾರೆ. ಹಾಗೂ ಚಾಲ್ತಿ ಪಾರದರ್ಶಕ ನೀತಿಯನ್ವಯ, ನಿಯಮಾನುಸಾರ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ವಿಜಯಪುರ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಸದರಿ ಕಾಮಗಾರಿಗೆ **4215-MVS** (ಓ&ಎಂ) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ/350/ಗ್ರಾನೀಸ(4)2021 ಬೆಂಗಳೂರು, ದಿನಾಂಕ:23.12.2021** 1103

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ವಿಜಯಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನ ಕೋಲ್ಹಾರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ **ವಿದ್ಯುತ್ ವೆಚ್ಚ ಸೇರಿದಂತೆ** ಒಟ್ಟು ಅಂದಾಜು ಮೊತ್ತ **ರೂ.633.10ಲಕ್ಷ (ಆರು ನೂರ ಮೂವತ್ತೂರು ಲಕ್ಷದ ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ 4215-MVS** (ಓ&ಎಂ) ಕಾರ್ಯಕ್ರಮದ ಅಡಿಯಲ್ಲಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ನಿರ್ವಹಣೆಯ ಗುತ್ತಿಗೆಯನ್ನು ವಹಿಸಲಾಗುವ ಸಂಸ್ಥೆಯೇ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ನಿರ್ವಹಿಸತಕ್ಕದ್ದು.

(ಆ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ. ಇಲಾಖೆ, ಬೆಂಗಳೂರುರವರು ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಸಾಧಿಸತಕ್ಕದ್ದು.

(ಇ) ಕಾಮಗಾರಿಯ ಪ್ರಾರಂಭದಿಂದ ಅಂತ್ಯದವರೆವಿಗೂ ಭೌತಿಕ ಹಾಗೂ ಆರ್ಥಿಕ ಪ್ರಗತಿಯ ವಿವರಗಳನ್ನು IMISನಲ್ಲಿ ದಾಖಲಿಸತಕ್ಕದ್ದು.

(ಈ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

(ಉ) ಸದರಿ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆ ಕಾಮಗಾರಿಯನ್ನು 2021-22ನೇ ಸಾಲಿನಿಂದ ಮುಂದಿನ 5 ವರ್ಷದವರೆಗೆ ಪರಿಗಣಿಸತಕ್ಕದ್ದು.

(ಊ) 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಕಾಮಗಾರಿಯ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿ ನೀಡಿ ಮೊದಲನೆಯ ವರ್ಷದ ಅವಧಿಯ ಮೊತ್ತಕ್ಕೆ ಟೆಂಡರ್ ಆಹ್ವಾನಿಸಿ, ಗುತ್ತಿಗೆದಾರರ ತೃಪ್ತಿಕರ ನಿರ್ವಹಣೆ ಪರಿಗಣಿಸಿ 5 ವರ್ಷದ ಅವಧಿಗೆ ಗುತ್ತಿಗೆಯನ್ನು ಮುಂದುವರೆಸುವ ಅಂಶಗಳನ್ನು ಅಳವಡಿಸಿಕೊಂಡು KTPP ಕಾಯ್ದೆಯಂತೆ ಕ್ರಮವಹಿಸತಕ್ಕದ್ದು.

(ಋ) ಸದರಿ ಯೋಜನೆಯಲ್ಲಿನ ಪಟ್ಟಣ ಪ್ರದೇಶದ O&M ವೆಚ್ಚವನ್ನು Pro-Rata ಆಧಾರದ ಮೇಲೆ ನಗರಾಭಿವೃದ್ಧಿ ಇಲಾಖೆ / ಸಂಬಂಧಿಸಿದ ಪಟ್ಟಣ ಪಂಚಾಯತಿ ವತಿಯಿಂದ ಪಡೆಯತಕ್ಕದ್ದು.

(ಎ) ಕಾರ್ಯಾಚರಣೆ ಮತ್ತು ನಿರ್ವಹಣೆ ಕಾಮಗಾರಿಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ:4215-01-102-2-01 ರಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ವಿಜಯಪುರ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ವಿಜಯಪುರ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ. ವೃತ್ತ ಕಛೇರಿ, **ಬೆಳಗಾವಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. & ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.&ಪಂ.ರಾಜ್ ಇಲಾಖೆ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&ನೈ. ವಿಭಾಗ, **ವಿಜಯಪುರ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. & ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. & ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂ: ಗ್ರಾಕುನೀ 4 ನೈಇ/350/ಗ್ರಾಕುನೀ(4)2021
ದಿನಾಂಕ: 22.12.2021ರ ಅನ್ವಯ.

# Name of Work :O & M to MVS TO Kolhar and Other 8 Villages of Kolhar Taluka of Vijayapur District

| Sl.No | Components | Amount | |
|---|---|---|---|
| | Part-A | | |
| 1 | FIRST YEAR 2021-22 | 9518879.34 | ~~10761147.00~~ ~~11552819.82~~ |
| 2 | SECOND YEAR 2022-23 | 9994823.30 | ~~11299204.00~~ ~~12130460.81~~ |
| 3 | THIRD YEAR 2023-24 | 10494564.47 | ~~11864164.00~~ ~~12736983.85~~ |
| 4 | FOURTH YEAR 2024-25 | 11019292.69 | ~~12457373.00~~ ~~13373833.04~~ |
| 5 | FIFTH YEAR 2025-26 | 11570257.33 | ~~13080241.00~~ ~~14042524.69~~ |
| | Part-B | | |
| 1 | Providing Electro-chlorinator | | 471100.00 |
| 2 | Special Repairs | | 3453901.00 ~~3758110.00~~ |
| | TOTAL Rs | 56522818.13 | ~~63387130.00~~ ~~68065832.00~~ |
| | Add 12 % GST | 6782738.18 | ~~7606456.00~~ ~~8167900.00~~ |
| | ~~Add Contigency & Miscellaneous Expenses~~ | | ~~306415.00~~ ~~1143506.00~~ |
| | SUB TOTAL Rs | 63305556.31 | ~~71300000.00~~ ~~77377238.00~~ |
| | Rounding off | 4443.69 | ~~762.00~~ |
| | Say Rs | 63310000.00 ~~71300000.00~~ | ~~77378000.00~~ |

Assistant Executive Engineer
R.D.W. & S Sub-Division B Bagewadi

Executive Engineer
R.D.W. & S Division Vijayapur

"ಅನುಮೋದಿಸಿದೆ"

ಸರ್ಕಾರದ ಉಪ ಕಾರ್ಯದರ್ಶಿ(ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು
ನೈರ್ಮಲ್ಯ ಇಲಾಖೆ, ಬೆಂಗಳೂರು

Superintending Engineer
Rural Drinking Water and
Sanitation Circle, Belagavi